ಲ್ಯಾಂಡ್ ಅಕ್ವಿಸಿಷನ್ ಪ್ರಾಬ್ಲಂ ಎಂದು ಹೇಳುತ್ತಾರೆ. ನಿಜವಾಗಲೂ ಕೂಡ ಲ್ಯಾಂಡ್ ಅಕ್ವಿಸಿಷನ್ ಪ್ರಾಬ್ಲಂ ಇದ್ದರೆ ಅದಕ್ಕೆ ನಾವು ತಲೆಬಾಗಿ ವಾಪಸ್ ಬರುತ್ತೇವೆ, ಅದನ್ನು ಉದಾಸಿಯವರು ಹೇಳಬೇಕು. ಇದು ವಿಶ್ವಬ್ಯಾಂಕಿನಿಂದ ಮಂಜೂರಾಗಿರುವ ಯೋಜನೆ, ಅದನ್ನು ಕ್ಯಾಬಿನೆಟ್ ನಲ್ಲಿ ತಂದು ಬದಲಾವಣೆ ಮಾಡಬೇಕು, ಅದನ್ನು ಕೂಡ ಮಾಡಿಲ್ಲ. ನಮ್ಮ ಮೇಲೆ ದ್ವೇಷದ ರಾಜಕಾರಣ ಮಾಡುವುದನ್ನು ಸನ್ಮಾನ್ಯ ಸಚಿವರು ಬಿಡಬೇಕೆಂದು, ಹೇಳಿ ಇದನ್ನು ಖಂಡಿಸಿ ನಾವು ಸಭಾತ್ಯಾಗ ಮಾಡುತ್ತಿದ್ದೇವೆ.[ಜೆಡಿಎಸ್ ಸದಸ್ಯರು ಸಭಾತ್ಯಾಗ ಮಾಡಿದರು]

ಪ್ರಕಟಣೆ

ವಿಷಯ: ವಿಧಾನ ಪರಿಷತ್ತು, 2009ನೇ ಸಾಲಿನ ವಿಧೇಯಕಗಳನ್ನು ದಿ:27–02–2009 ರಂದು ಯಾವುದೇ ತಿದ್ದುಪಡಿಗಳಿಲ್ಲದೇ ಸಹಮತಿ ನೀಡಿರುವ ಬಗ್ಗೆ.

ಉಪಾಧ್ಯಕ್ಷರು: ಈಗ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಂದ ಸಂದೇಶವಿದೆ. ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಬಮದಿರುವ ಸಂದೇಶದಲ್ಲಿ, ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಮತ್ತು ನಡವಳಿಕೆ ನಿಯಮ 118ರ ಮೇರೆಗೆ ವಿಧಾನ ಪರಿಷತ್ತು 2009ನೇ ಸಾಲಿನ ಈ ಕೆಳಕಂಡ ವಿಧೇಯಕಗಳನ್ನು ದಿನಾಂಕ: 27.2.2009ರಂದು ಯಾವುದೇ ತಿದ್ದುಪಡಿಗಳಿಲ್ಲದೆ ಅಂಗೀಕರಿಸಿರುತ್ತಾರೆಂದು ತಿಳಿಸಿರುತ್ತಾರೆ.

1. ಕರ್ನಾಟಕ ಧನ ವಿನಿಯೋಗ ವಿಧೇಯಕ, 2009,
2. ಕರ್ನಾಟಕ ಮೌಲ್ಯವರ್ಧಿತ ತೆರಿಗೆ ತಿದ್ದುಪಡಿ ವಿಧೇಯಕ, 2009,
3. ಕರ್ನಾಟಕ ತೆರಿಗೆ ಕಾನೂನುಗಳ ತಿದ್ದುಪಡಿ ವಿಧೇಯಕ, 2009
4. ಕರ್ನಾಟಕ ಮೋಟಾರು ವಾಹನಗಳ ತೆರಿಗೆ ತಿದ್ದುಪಡಿ ವಿಧೇಯಕ, 2009,
5. ಕರ್ನಾಟಕ ಆರ್ಥಿಕ ಹೊಣೆಗಾರಿಕೆ ತಿದ್ದುಪಡಿ ವಿಧೇಯಕ, 2009,
6. ಕರ್ನಾಟಕ ಸ್ಟ್ಯಾಂಪ್ ತಿದ್ದುಪಡಿ ವಿಧೇಯಕ, 2009 ಮತ್ತು
7. ಕರ್ನಾಟಕ ಧನವನಿಯೋಗ ಸಂಖ್ಯೆ:1 ವಿಧೇಯಕ 2009.

10. ಸಂಕ್ಷಿಪ್ತ ವರದಿ

ವಿಷಯ:– 13ನೇ ವಿಧಾನಸಭೆಯ ಎರಡನೇ ಅಧಿವೇಶನದ ಮುಂದುವರೆದ ಉಪವೇಶನಗಳ ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ.

******

ಹದಿಮೂರನೇ ವಿಧಾನಸಭೆಯ ಎರಡನೇ ಅಧಿವೇಶನದ ಮುಂದುವರೆದ ಉಪವೇಶನವು ದಿನಾಂಕ 19 ಫೆಬ್ರವರಿ, 2009 ರಿಂದ ದಿನಾಂಕ 27ನೇ ಫೆಬ್ರವರಿ,